## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 784 |
| ಸದಸ್ಯರ ಹೆಸರು | ಶ್ರೀ ಎನ್. ನಾಗರಾಜು (ಎಂ.ಟಿ.ಬಿ.) (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 23.07.2024 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕಿನ ಬೈಲನರಸಾಪುರ, ಹುಳುವನಹಳ್ಳಿ, ದೊಡ್ಡರಾಮನಹಳ್ಳಿ, ಬೀರಹಳ್ಳಿ ಗ್ರಾಮಗಳಲ್ಲಿ ಹಾಗೂ ಸುತ್ತಮುತ್ತ ಅಕ್ರಮವಾಗಿ ಫಿಲ್ಟರ್ ಮರಳು ಗಣಿಗಾರಿಕೆಯಿಂದ 60 ರಿಂದ 70 ಅಡಿ ಗುಂಡಿ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ಗ್ರಾಮಾಂತರ ಜಿಲ್ಲೆ, ಹೊಸಕೋಟೆ ತಾಲ್ಲೂಕು, ಬೈಲನರಸಾಪುರ, ಹುಳುವನಹಳ್ಳಿ, ದೊಡ್ಡ ರಾಮನಹಳ್ಳಿ, ಬೀರಹಳ್ಳಿ ಗ್ರಾಮಗಳ ವ್ಯಾಪ್ತಿಯಲ್ಲಿ ಪ್ರಸ್ತುತ ಯಾವುದೇ ಫಿಲ್ಟರ್ ಮರಳು ಗಣಿಗಾರಿಕೆ ನಡೆಸುತ್ತಿರುವುದು ಕಂಡು ಬಂದಿರುವುದಿಲ್ಲ. ಆದರೆ ಈ ಹಿಂದೆ ಸುಮಾರು 04 ರಿಂದ 05 ವರ್ಷಗಳ ಹಿಂದೆ ಫಿಲ್ಟರ್ ಮರಳು ಗಣಿಗಾರಿಕೆಯಿಂದ ಸುಮಾರು 10 ರಿಂದ 12 ಅಡಿ ಗುಂಡಿಗಳು ಆಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಕಳೆದ ಮೂರು ವರ್ಷಗಳಲ್ಲಿ ಅಕ್ರಮ ಫಿಲ್ಟರ್ ಮರಳು ಗಣಿಗಾರಿಕೆ ನಡೆಸುತ್ತಿದ್ದ ಆರೋಪದ ಮೇಲೆ ಎಷ್ಟು ಜನರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ: (ಸಂಪೂರ್ಣ ಮಾಹಿತಿ ನೀಡುವುದು) | ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಅಕ್ರಮ ಫಿಲ್ಟರ್ ಮರಳು ಗಣಿಗಾರಿಕೆ ಸಂಬಂಧಪಟ್ಟಂತೆ ಯಾವುದೇ ಪ್ರಕರಣಗಳು ನಡೆದಿರುವುದು ಕಂಡು ಬಂದಿರುವುದಿಲ್ಲ. |
| ಇ) | ಅಕ್ರಮ ಫಿಲ್ಟರ್ ಮರಳು ಗಣಿಗಾರಿಕೆ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು: | ಅಕ್ರಮ ಫಿಲ್ಟರ್ ಮರಳು ಗಣಿಗಾರಿಕೆ ತಡೆಗಟ್ಟಲು ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯ ಸದಸ್ಯ ಇಲಾಖೆಗಳಿಂದ ಕಟ್ಟುನಿಟ್ಟಿನ ಕ್ರಮ ವಹಿಸಲಾಗಿದ್ದು, ಫಿಲ್ಟರ್ ಮರಳು ಗಣಿಗಾರಿಕೆಯನ್ನು ತಡೆ ಹಿಡಿಯಲಾಗಿರುತ್ತದೆ. |
| ಈ) | ಅಕ್ರಮ ಫಿಲ್ಟರ್ ಮರಳು ಗಣಿಗಾರಿಕೆ ಎಗ್ಗಿಲ್ಲದೆ ನಡೆಯುತ್ತಿದ್ದರೂ, ಸೂಕ್ತ ಕ್ರಮ ಕೈಗೊಳ್ಳದ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು? | ಬೆಂಗಳೂರು ಗ್ರಾಮಾಂತರ ಜಿಲ್ಲೆ, ಹೊಸಕೋಟೆ ತಾಲ್ಲೂಕು, ಬೈಲನರಸಾಪುರ, ಹುಳುವನಹಳ್ಳಿ, ದೊಡ್ಡ ರಾಮನಹಳ್ಳಿ, ಬೀರಹಳ್ಳಿ ಗ್ರಾಮಗಳಲ್ಲಿ ಹಾಗೂ ಸುತ್ತಮುತ್ತಲ್ಲಿನ ಗ್ರಾಮಗಳಲ್ಲಿ ಪ್ರಸ್ತುತ ಯಾವುದೇ ಅಕ್ರಮವಾಗಿ ಫಿಲ್ಟರ್ ಮರಳು ಗಣಿಗಾರಿಕೆ ನಡೆಯುತ್ತಿರುವುದು ಕಂಡು ಬಂದಿರುವುದಿಲ್ಲ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳ ವಿರುದ್ಧ ಅಕ್ರಮ ಫಿಲ್ಟರ್ ಮರಳು ತಡೆಗಟ್ಟದಿರುವ ಬಗ್ಗೆ ದೂರುಗಳು ಇರುವುದಿಲ್ಲ. |

ಸಂಖ್ಯೆ ಸಿಐ-ಎಂಎಂಎನ್/168/2024

S. S. — [signature]

**(ಎಸ್.ಎಸ್. ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.